ಪೊಲೀಸ್ ವೃತ್ತ ನಿರೀಕ್ಷಕರ ಕಛೇರಿಗೆ ಕಟ್ಟಡ ಒದಗಿಸುವುದು

440(740) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

ಅ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕು ಬೈಂದೂರಿನಲ್ಲಿ ಇರುವ ಪೊಲೀಸ್ ವೃತ್ತ ನಿರೀಕ್ಷಕರ ಕಛೇರಿಗೆ ಸುಸಜ್ಜಿತ ಕಟ್ಟಡವನ್ನು ಯಾವಾಗ ಒದಗಿಸಲಾಗುವುದು?

ಆ) ಹಾಗಿದ್ದಲ್ಲಿ, ಈ ಕಛೇರಿಗೆ ಸುಸಜ್ಜಿತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಶ್ರೀ ಕೆ,ಜೆ.ಜಾರ್ಜ್ (ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕು ಬೈಂದೂರಿನಲ್ಲಿ ಇರುವ ಪೊಲೀಸ್ ವೃತ್ತ ನಿರೀಕ್ಷಕರ ಕಛೇರಿ ಕಟ್ಟಡವನ್ನು ಅನುದಾನ ಲಭ್ಯತೆಯ ಮೇರೆಗೆ ನಿರ್ಮಿಸಲಾಗುವುದು.

ಖಾಲಿ ಹುದ್ದೆಗಳ ಭರ್ತಿ

441(741) ಶ್ರೀ ಗೋಪಾಲ ಪೂಜಾರಿ. ಕೆ. (ಬೈಂದೂರು)

ಅ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಬೈಂದೂರು ವಿಧಾನಸಭಾ ಕ್ಷೇತ್ರದಲ್ಲಿರುವ ಪಶುಚಿಕಿತ್ಸಾ ಕೇಂದ್ರಗಳು ಎಷ್ಟು?

ಅವುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು?

ಆ) ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಈ ಪಶುಚಿಕಿತ್ಸಾ ಕೇಂದ್ರಗಳನ್ನು ಉನ್ನತೀಕರೀಸಿ ಮೇಲ್ದರ್ಜೆಗೇರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಈ) ರಾಜ್ಯದಲ್ಲಿ ಕಂಡುಬಂದಿರುವ ಕಾಲುಬಾಯಿ ರೋಗವನ್ನು ನಿಯಂತ್ರಿಸಲು ಮುನ್ನೆಚ್ಚರಿಕೆ ಕ್ರಮವಾಗಿ ಸರ್ಕಾರದ ತೆಗೆದು ಕೊಂಡ ಕ್ರಮವೇನು?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನಾ ಸಚಿವರು)

ಅ) ಉಡುಪಿ ಜಿಲ್ಲೆ ಕುಂದಾಪುರ ತಲೂಕಿನ ಬೈಂದೂರು ವಿಧಾನ ಸಭಾಕ್ಷೇತ್ರದಲ್ಲಿ 16 ವಿವಧ ಪಶುವೈದ್ಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ ಅವುಗಳು ವಿವರ ಈ ಕೆಳಕಂಡಂತಿದೆ.

1. ಪಶು ಆಸ್ಪತ್ರೆ – 3
2. ಪಶು ಚಿಕಿತ್ಸಾಲಯ– 5
3. ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ 8

ಒಟ್ಟು 16

ಈ ಪಶುವೈದ್ಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ 21 ಹಾಗೂ ಖಾಲಿಯಿರುವ ಹುದ್ದೆಗಳು 35

ಆ) ಇಲಾಖೆಯಲ್ಲಿ ಖಾಲಿ ಇರುವ ಪಶು ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮದಡಿ ಈಗಾಗಲೇ 331 ಪಶುವೈದ್ಯಾಧಿಕಾರಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ. ಖಾಲಿ ಇರುವ 642 ಪಶುವೈದ್ಯ ಸಹಾಯಕರುಗಳ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಈ ಆಯ್ಕೆಗೊಂಡ ಪಶುವೈದ್ಯಾಧಿಕಾರಿಗಳಿಗೆ ಹಾಗೂ ಪಶುವೈದ್ಯಕೀಯ ಸಹಾಯಕರುಗಳಿಗೆ ನೇಮಕಾತಿ ಆದೇಶ ನೀಡುವ ಸಂದರ್ಭದಲ್ಲಿ ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಬೈಂದೂರು ವಿಧಾನಸಭಾ ಕ್ಷೇತ್ರದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ಮೇಲೆ ಪರಿಗಣಿಸಲಾಗುವುದು ಇಲಾಖೆಯಲ್ಲಿ ವಿವಿಧ ವೃಂದದ ಹುದ್ದೆಗಳನ್ನು ಮುಂಬಡ್ತಿ ಮತ್ತು ವರ್ಗಾವಣೆ ಸಂದರ್ಭದಲ್ಲಿ ಆದ್ಯತೆ ಮೇಲೆ ಭರ್ತಿ ಮಾಡಲು ಪರಿಗಣಿಸಲಾಗುವುದು.

ಇ) ಈಗಾಗಲೇ ಪಶುಚಿಕಿತ್ಸಾಲಯ, ಬೈಂದೂರು ಮತ್ತು ಪಶುಚಿಕಿತ್ಸಾಲಯ ವಂಡ್ಸೆ ಇವುಗಳನ್ನು ಪಶು ಆಸ್ಪತ್ರೆ ಆಗಿ ಇಲಾಖೆ ಪುನರ್ ರಚನೆ ಆದೇಶದಲ್ಲಿ ಮೇಲ್ದರ್ಜೆಗೇರಿಸಲಾಗಿದೆ.

ಈ) ರಾಜ್ಯದಲ್ಲಿ ಕಂಡುಬಂದಿರುವ ಕಾಲುಬಾಯಿ ರೋಗ ನಿಯಂತ್ರಿಸಲು ಸಂಪೂರ್ಣವಾಗಿ ಲಸಿಕೆ ಹಾಕಲಾಗಿದೆ. ಇಲ್ಲಿಯವರೆಗೆ ರಾಜ್ಯದಲ್ಲಿ 1,18,23,152 ಜಾನುವಾರುಗಳಿಗೆ ಲಸಿಕೆ ಹಾಕಿದ್ದು, ಇದರಲ್ಲಿ ಉಡುಪಿ ಜಿಲ್ಲೆಯಲ್ಲಿ 2,28,610 ಜಾನುವಾರುಗಳಿಗೆ ಲಸಿಕೆ ಹಾಕಲಾಗಿದೆ. ಮುಂದುವರೆಯುತ್ತಾ 6 ನೇ ಸುತ್ತಿನ ಕಾಲುಬಾಯಿ ರೋಗ ನಿಯಂತ್ರಣ ಲಸಿಕಾ ಕಾರ್ಯಕ್ರಮದಲ್ಲಿ ದಿ; 15/2/2014 ರಿಂದ 14/3/2014 ವರೆಗೆ ಲಸಿಕೆ ಹಾಕಲು ಕಾರ್ಯಕ್ರಮ ರೂಪಿಸಲಾಗಿದೆ. ಜಾನುವಾರು ಸಂಖ್ಯೆಗಳಿಗೆ ಅನುಗುಣವಾಗಿ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಲಸಿಕೆ ದಾಸ್ತಾನು ಮಾಡಿಕೊಳ್ಳಲಾಗಿದೆ.